# ದಾವಣಗೆರೆ ವಿಶ್ವವಿದ್ಯಾನಿಲಯ
# Davangere University

ಕುಲಸಚಿವರ ಕಚೇರಿ (ಪರೀಕ್ಷಾಂಗ),
ದಾವಣಗೆರೆ ವಿಶ್ವವಿದ್ಯಾನಿಲಯ,
ಶಿವಗಂಗೋತ್ರಿ, ದಾವಣಗೆರೆ-577007.
ದೂರವಾಣಿ ಸಂಖ್ಯೆ: 08192-208420/208104.

Office of the Registrar (Evaluation)
Davangere University,
Shivagangothri, Davangere -577007.
Phone No. 08192-208420/208104.

Email ID: examination@davangereuniversity.ac.in, registrarevaluationdvg@gmail.com


ಸಂಖ್ಯೆ:ದಾವಿ:ಪವಿ:ಆಶಾ:2020-21; 2950 ದಿನಾಂಕ:11/12/2020

## :: ಸುತ್ತೋಲೆ ::

ವಿಷಯ: ಕೋವಿಡ್-19 ಹಿನ್ನೆಲೆಯಲ್ಲಿ ಸ್ನಾತಕ ಪದವಿ ಪರೀಕ್ಷೆಗಳಿಗೆ ಗೈರುಹಾಜರಾದ /ಅನುತ್ತೀರ್ಣಗೊಂಡ ವಿದ್ಯಾರ್ಥಿಗಳಿಗೆ ವಿಶೇಷವಾಗಿ ಪರೀಕ್ಷೆಗಳನ್ನು ನಡೆಸುವ ಹಾಗೂ ಪರೀಕ್ಷಾ ಶುಲ್ಕ ಪಾವತಿಸುವ ಬಗ್ಗೆ.

ಉಲ್ಲೇಖ: ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 01/12/2020.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕೋವಿಡ್-19ರ ಹಿನ್ನೆಲೆಯಲ್ಲಿ ಸೆಪ್ಟೆಂಬರ್/ಅಕ್ಟೋಬರ್-2020ರ ಮಾಹೆಯಲ್ಲಿ ನಡೆದ ಸ್ನಾತಕ ಪದವಿಯ ಅಂತಿಮ ಸೆಮಿಸ್ಟರ್‌ನ / ಎಲ್ಲಾ ಸೆಮಿಸ್ಟರ್ ರಿಪಿಟರ್ಸ್ ಪರೀಕ್ಷೆಗಳಿಗೆ ಗೈರು ಹಾಜರಾದ/ಅನುತ್ತೀರ್ಣಗೊಂಡ ವಿದ್ಯಾರ್ಥಿಗಳಿಗೆ ಮಾತ್ರ ವಿಶೇಷವಾಗಿ ದಿನಾಂಕ: 06/01/2021ರಿಂದ ಪರೀಕ್ಷೆಗಳನ್ನು ನಡೆಸಲಾಗುವುದು ಎಂದು ಈ ಮೂಲಕ ತಿಳಿಸಲಾಗಿದೆ. ಪರೀಕ್ಷಾ ವೇಳಾಪಟ್ಟಿಯನ್ನು ನಂತರದ ದಿನಗಳಲ್ಲಿ ಪ್ರಕಟಿಸಲಾಗುವುದು. ಈ ವಿಷಯವನ್ನು ವಿದ್ಯಾರ್ಥಿಗಳ ಗಮನಕ್ಕೆ ತರಲು ಎಲ್ಲಾ ಪ್ರಾಚಾರ್ಯರುಗಳಿಗೆ ಆದೇಶಿಸಲಾಗಿದೆ.

**ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ದಿನಾಂಕಗಳು**

ದಂಡಶುಲ್ಕವಿಲ್ಲದೆ ------------------ 16-12-2020 ರಿಂದ 19-12-2020 ರವರೆಗೆ
ದಂಡಶುಲ್ಕ ರೂ.110 ರಂತೆ ಪ್ರತಿ ಸೆಮಿಸ್ಟರ್‌ಗೆ ------------------ 20-12-2020
ದಂಡಶುಲ್ಕ ರೂ.550 ರಂತೆ ಪ್ರತಿ ಸೆಮಿಸ್ಟರ್‌ಗೆ ----------------- 21-12-2020

**ಅನುತ್ತೀರ್ಣಗೊಂಡ/ ಗೈರು ಹಾಜರಾದ ವಿದ್ಯಾರ್ಥಿಗಳಿಗೆ ಶುಲ್ಕದ ವಿವರಗಳು**

ಅ. ಬಿ.ಎ / ಬಿ.ಎಸ್ಸಿ / ಬಿ.ಕಾಂ ವಿದ್ಯಾರ್ಥಿಗಳಿಗೆ

| ಕ್ರ.ಸಂ | ವಿವರ | ಪ್ರಸ್ತುತ ಶುಲ್ಕದ ವಿವರ |
|---|---|---|
| 1 | ಪ್ರತಿ ಸೆಮಿಸ್ಟರ್ ಪೂರ್ಣ ಪರೀಕ್ಷೆಗೆ | ಪರೀಕ್ಷಾ ಶುಲ್ಕ ರೂ. 505.00<br>ಅಂಕಪಟ್ಟಿ ಶುಲ್ಕ ರೂ. 165.00<br>-----<br>ಒಟ್ಟು ಶುಲ್ಕ ರೂ. = 670.00 |
| 2 | ಪ್ರತಿ ಪತ್ರಿಕೆಗೆ ಥಿಯರಿ ಪರೀಕ್ಷೆ (ಸೆಮಿಸ್ಟರ್‌ನ ಎಲ್ಲಾ ಪತ್ರಿಕೆಗಳಿಗೆರೂ.420.00 ಕ್ಕೆ ಒಳಪಟ್ಟು) | ರೂ. 155.00 |
| 3 | ಪ್ರಾಯೋಗಿಕ ಪರೀಕ್ಷೆಗೆ ಪ್ರತಿ ಪತ್ರಿಕೆಗೆ(ಫೇಲ್ ವಿದ್ಯಾರ್ಥಿಗಳಿಗೆ) | ರೂ. 115.00 |

ಆ. ಬಿ.ಬಿ.ಎಂ /ಬಿ.ಸಿ.ಎ /ಬಿ.ಎಸ್.ಎ /ಬಿ.ಎಸ್.ಡಬ್ಲ್ಯೂ/ಬಿ.ವಿ.ಎ/ಬಿ.ಎಫ್.ಡಿ/ಬಿ.ಬಿ.ಎ/ಬಿ.ಎಸ್ಸಿ(Hospitality Science)ವಿದ್ಯಾರ್ಥಿಗಳಿಗೆ

| ಕ್ರ.ಸಂ | ವಿವರ | ಪ್ರಸ್ತುತ ಶುಲ್ಕದ ವಿವರ |
|---|---|---|
| 1 | ಪ್ರತಿ ಸೆಮಿಸ್ಟರ್ ಪೂರ್ಣ ಪರೀಕ್ಷೆಗೆ | ಪರೀಕ್ಷಾ ಶುಲ್ಕ ರೂ. 870.00<br>ಅಂಕಪಟ್ಟಿ ಶುಲ್ಕ ರೂ. 165.00<br>------<br>ಒಟ್ಟು ಶುಲ್ಕ ರೂ. 1,035.00 |
| 2 | ಪ್ರತಿ ಪತ್ರಿಕೆಗೆ ಥಿಯರಿ ಪರೀಕ್ಷೆ (ಸೆಮಿಸ್ಟರ್‌ನ ಎಲ್ಲಾ ಪತ್ರಿಕೆಗಳಿಗೆ ರೂ.720.00 ಕ್ಕೆ ಒಳಪಟ್ಟು) | ರೂ. 180.00 |
| 3 | ಪ್ರಾಯೋಗಿಕ ಪರೀಕ್ಷೆಗೆ ಪ್ರತಿ ಪತ್ರಿಕೆಗೆ (ಫೇಲ್ ವಿದ್ಯಾರ್ಥಿಗಳಿಗೆ) | ರೂ. 115.00 |

| | |
|---|---|
| 2012-13ನೇ ಪಠ್ಯಕ್ರಮದ ದ್ವಿಗುಣ ಅವಧಿ (Double the Duration)ಮುಗಿದ ವಿದ್ಯಾರ್ಥಿಗಳಿಗೆ | ಪ್ರಸ್ತುತ ಪ್ರಕಟಣೆಯಲ್ಲಿ ನಿಗದಿ ಪಡಿಸಿದ ಪರೀಕ್ಷಾ ಶುಲ್ಕದ ಜೊತೆಗೆ ಪ್ರತಿ ಸೆಮಿಸ್ಟರ್‌ಗೆ ವಿಶೇಷ ಶುಲ್ಕ ರೂ:2000/- ನ್ನು ನಿಗದಿಪಡಿಸಲಾಗಿದೆ |

**ಸೂಚನೆ:**

1. **ಸ್ನಾತಕ ಪದವಿಯ ಅಂತಿಮ ಸೆಮಿಸ್ಟರ್‌ನ / ಎಲ್ಲಾ ಸೆಮಿಸ್ಟರ್ ರಿಪಿಟರ್ಸ್ ವಿದ್ಯಾರ್ಥಿಗಳಿಗೆ ವಿಶೇಷವಾಗಿ ನಡೆಸಲಾಗುವ ಪರೀಕ್ಷೆಗಳಲ್ಲಿ ಉತ್ತರ ಪತ್ರಿಕೆಯ ಜೆರಾಕ್ಸ್ / ಮರುಮೌಲ್ಯಮಾಪನ / ಮರುಸಂಕಲನಕ್ಕೆ ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ.**
2. **2012-13ನೇ ಪಠ್ಯಕ್ರಮದ ದ್ವಿಗುಣ ಅವಧಿ (Double the Duration)ಮುಗಿದ ವಿದ್ಯಾರ್ಥಿಗಳಿಗೆ ವಿಶೇಷವಾಗಿ ಜನವರಿಯಲ್ಲಿ ನಡೆಸಲಾಗುವ ಪರೀಕ್ಷೆ ಅಂತಿಮ ಅವಕಾಶವಾಗಿರುತ್ತದೆ.**
3. **ಕೋವಿಡ್-19ರ ಹಿನ್ನೆಲೆಯಲ್ಲಿ 2ನೇ ಮತ್ತು 4ನೇ ಸೆಮಿಸ್ಟರ್‌ಗಳ(ರೆಗ್ಯುಲರ್) ಫಲಿತಾಂಶಗಳನ್ನು ಕೇಂದ್ರ ಗೃಹ ಇಲಾಖೆ ಹಾಗೂ ರಾಜ್ಯ ಸರ್ಕಾರಗಳ ಸೂಚನೆಯಂತೆ ನಿರ್ಧರಿಸಿ ಪ್ರಕಟಿಸಲಾಗಿದ್ದು ಫಲಿತಾಂಶದಲ್ಲಿ ವಿದ್ಯಾರ್ಥಿಗೆ ಯಾವುದೇ ಅಸಮಾಧಾನವಿದ್ದಲ್ಲಿ ಅಂತಹ ವಿದ್ಯಾರ್ಥಿಗಳು ಸೆಮಿಸ್ಟರ್‌ನ ಯಾವುದೇ ಪತ್ರಿಕೆ/ಎಲ್ಲಾ ಪತ್ರಿಕೆಗಳ ಫಲಿತಾಂಶವನ್ನು ತಿರಸ್ಕರಿಸಿ ವಿಶೇಷವಾಗಿ ಜನವರಿಯಲ್ಲಿ ನಡೆಸಲಾಗುವ ಪರೀಕ್ಷೆಗಳಲ್ಲಿ ಬರೆಯಲು ಅವಕಾಶನೀಡಲಾಗಿದೆ.**

ಕುಲಸಚಿವರು (ಪರೀಕ್ಷಾಂಗ),
ದಾವಣಗೆರೆ ವಿಶ್ವವಿದ್ಯಾನಿಲಯ,
ಶಿವಗಂಗೋತ್ರಿ, ದಾವಣಗೆರೆ-577002

ಗೆ,
ವಿಶ್ವವಿದ್ಯಾನಿಲಯದ ವ್ಯಾಪ್ತಿಗೊಳಪಡುವ ಎಲ್ಲಾ ಸ್ನಾತಕ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.

ಪ್ರತಿ:

1 ಮಾನ್ಯ ಕುಲಪತಿಗಳು/ ಕುಲಸಚಿವರ(ಆಡಳಿತ)/ ಹಣಕಾಸು ಅಧಿಕಾರಿಗಳು, ಆಪ್ತ ಕಾರ್ಯಾಲಯ, ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ.

2 ಸಂಚಾಲಕರು, ಪರಿಶಿಷ್ಟ ಜಾತಿ/ಪಂಗಡ ಘಟಕ ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ.

3 ಉಪಕುಲಸಚಿವರು/ಸಹಾಯಕ ಕುಲಸಚಿವರು/ಅಧೀಕ್ಷಕರು, ಮಾಸವಿ/ಶೈಕ್ಷಣಿಕ/ಪರೀಕ್ಷಾಂಗ/ಸಿಡಿಸಿ/ಅಭಿವೃದ್ಧಿ ವಿಭಾಗ ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ.

4 ಪ್ರಾದೇಶಿಕ ಮುಖ್ಯಸ್ಥರು, ಲಾಜಿಸಿಶ್, ದಾವಣಗೆರೆ.

5 ಕಛೇರಿ ಪ್ರತಿ.